ಚಿಂತಾಮಣಿ ತಾಲ್ಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ

4514 (5159) : ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ತಾಲ್ಲೂಕಿನ ಗ್ರಾಮಗಳಲ್ಲಿ ಬತ್ತಿಹೋಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

ಆ) ಕುಡಿಯುವ ನೀರಿಗೆ ಅಭಾವ ಉಂಟಾಗಿರುವ ಗ್ರಾಮಗಳಲ್ಲಿ ಕೊಳವೆ ಬಾವಿಗಳನ್ನು ಕೊರೆದು ನೀರಿನ ಬವಣೆಯನ್ನು ತಪ್ಪಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ;

ಇ) ಕುಡಿಯುವ ನೀರಿನ ಅಭಾವ ಉಂಟಾಗಿರುವ ಗ್ರಾಮಗಳಿಗೆ ಸರ್ಕಾರ ಹಣಕಾಸು ನೆರವು ಒದಗಿಸಲು ಏನು ಕ್ರಮ ಕೈಗೊಂಡಿದೆ?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು)

ಅ) 130

ಆ) ಗ್ರಾಮಗಳಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಣೆ ಮಾಡಲು 112 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಮತ್ತು ಬರಪರಿಹಾರ ಅನುದಾನದಡಿ ಪೈಪ್‌ಲೇನ್‌ಗಳನ್ನು/ ಪಂಪ್‌ಸೆಟ್‌ಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ಇ) ಹೊಸ ಕೊಳವೆ ಬಾವಿಗಳನ್ನು ಕೊರೆಯಲು ರೂ. 68.00 ಲಕ್ಷಗಳನ್ನು ಕೋಲಾರ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲಾಗಿದೆ. ಇದಲ್ಲದೆ, ಸದರಿ ಜಿಲ್ಲೆಗೆ ರೂ. 268.00 ಲಕ್ಷಗಳನ್ನು ಬರಪರಿಹಾರ ನಿಧಿಯಿಂದ ಬಿಡುಗಡೆ ಮಾಡಲಾಗಿದೆ.

ಆರೋಗ್ಯ ಇಲಾಖೆಯಲ್ಲಿ ಅವಧಿ ಮೀರಿದ ಔಷಧಿಗಳ ಖರೀದಿ

4515 (5119) : ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅವಧಿ ಮೀರಿರುವ ಔಷಧಿಗಳ ಖರೀದಿ ಮತ್ತು ಸರಬರಾಜು ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮೊತ್ತದ ಅವಧಿ ಮೀರಿದ ಔಷಧಿಗಳನ್ನು ಸರಬರಾಜು ಮಾಡಲಾಗಿದೆ.

ಇ) ಇವುಗಳನ್ನು ಹೇಗೆ ವಿಲೇವಾರಿ ಮಾಡಲಾಗಿದೆ.

ಈ) ಕಳಪೆ ಗುಣಮಟ್ಟದ ಮತ್ತು ದೋಷಯುಕ್ತ ಔಷಧಿಗಳ ಖರೀದಿಗೆ ಮಂಜೂರಾತಿ ನೀಡಿದ ಅಧಿಕಾರಿಗಳು ಯಾರು; ಅವರ ವಿರುದ್ಧ ಏನು ಕ್ರಮ ತೆಗೆದುಕೊಳ್ಳಲಾಗಿದೆ;

ಉ) ಎಷ್ಟು ಮೊತ್ತದ ದಂಡ ವಸೂಲು ಮಾಡಲಾಗಿದೆ; ಈ ರೀತಿ ಪ್ರಕರಣ ಮರಕಳುಹಿಸದಂತೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು;

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿರುವುದಿಲ್ಲ.

ಆ) ಅವಧಿ ಮೀರಿನ ಔಷಧಿಗಳನ್ನು ಖರೀದಿಸಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಕಳಪೆ ಗುಣಮಟ್ಟದ ಮತ್ತು ದೋಷಯುಕ್ತ ಔಷಧಿಗಳನ್ನು ಖರೀದಿಸಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.